1073 (1478) ಶ್ರೀ ಸಿ.ಟಿ. ರವಿ(ಚಿಕ್ಕಮಗಳೂರು) :– ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ಮಾಹಿತ ಸಿಂಧು ಯೋಜನೆ ರದ್ದತಿಯಿಂದ ವಿದ್ಯಾರ್ಥಿಗಳಿಗೆ ಆಗಿರುವ ಅನ್ಯಾಯ ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಬಂದಿದ್ದರೆ, ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಬಸವರಾಜ ಹೊರಟ್ಟಿ (ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

(ಅ) ಸರ್ಕಾರದ ಗಮನಕ್ಕೆ ಬಂದಿದೆ.

(ಆ) ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಹಿನ್ನೆಲೆಯಲ್ಲಿ ಮಾಹಿತಿ ಸಿಂಧು ಯೋಜನೆಯನ್ನು ಪುನಃ ಮೂರು ವರ್ಷಗಳ ಅವಧಿಗೆ ಮುಂದುವರೆಸಲಾಗಿದೆ.

1074 (1479) ಶ್ರೀ ಸಿ.ಟಿ. ರವಿ(ಚಿಕ್ಕಮಗಳೂರು) :– ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಈ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಳದಿಂದ ಕಾಲೇಜಿಗೆ ಪ್ರವೇಶ ಸಿಗದ ವಿದ್ಯಾರ್ಥಿಗಳು ಆತಂಕಕ್ಕೆ ಈಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರದ ಗಮನಕ್ಕೆ ಬಂದಿದ್ದರೆ, ಈ ಸಮಸ್ಯೆ ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮ ಏನು;

(ಇ) ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೊಸ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ;

(ಈ) ಉದ್ದೇಶಿಸಿದರೆ ಹೊಸ ಕಾಲೇಜುಗಳ ಸಂಖ್ಯೆ ಎಷ್ಟು; ಕಾಲೇಜು ಪ್ರಾರಂಭಿಸಲಿರುವ ಸ್ಥಳಗಳಾವುವು; (ಜಿಲ್ಲಾವಾರು ವಿವರ ಕೊಡುವುದು)

ಶ್ರೀ ಬಸವರಾಜ ಹೊರಟ್ಟಿ (ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

(ಅ) 2007–08ನೇ ಸಾಲಿನಲ್ಲಿ 194 ಖಾಸಗಿ ಶಾಶ್ವತ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಹಾಗೂ 101 ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ರಾಜ್ಯದ ವಿವಿಧ ಸ್ಥಳಗಳಲ್ಲಿ ಪ್ರಾರಂಭಿಸಲು ಸರ್ಕಾರವು ಅನುಮತಿ ನೀಡಿದೆ. ಅಲ್ಲದೆ, ವಿದ್ಯಾರ್ಥಿಗಳ ಸಂಖ್ಯಾಬಲ ಹೆಚ್ಚಾಗಿರುವ ಪದವಿ ಪೂರ್ವ ಕಾಲೇಜುಗಳು ಇರುವ ಸ್ಥಳಗಳಲ್ಲಿ ಹೆಚ್ಚುವರಿ ಸಂಯೋಜನೆ/ವಿಭಾಗಗಳನ್ನು ತೆರೆಯಲು ಅನುಮತಿ ನೀಡಲಾಗಿದೆ. ಆದ್ದರಿಂದ ಪದವಿ ಪೂರ್ವ ಕಾಲೇಜಿನ ಪ್ರವೇಶದ ಬಗ್ಗೆ ವಿದ್ಯಾರ್ಥಿಗಳು ಆತಂಕಕ್ಕೆ ಒಳಪಟ್ಟಿರುವುದಿಲ್ಲ.

(ಆ) ಮೇಲೆ "ಅ" ನಲ್ಲಿ ನೀಡಿರುವ ಉತ್ತರದನ್ವಯ ಈ ಪ್ರಶ್ನೆ ಉದ್ಭವಿಸುವುದಿಲ್ಲ.

(ಇ), (ಈ) ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರಾತಿಯ ವಿಷಯವು ನಿರಂತರ ಪ್ರಕ್ರಿಯೆಯಾಗಿದ್ದು, ಆಯಾಯ ಸ್ಥಳಗಳಲ್ಲಿ ಲಭ್ಯವಿರುವ ಕಟ್ಟಡ, ಇತರೆ ಮೂಲಭೂತ ಸೌಲಭ್ಯಗಳು, ಸ್ಥಳೀಯ ಶೈಕ್ಷಣಿಕ ಅಗತ್ಯತೆ, ಪೂರಕ ಪ್ರೌಢಶಾಲೆಗಳ ಸಂಖ್ಯೆ, ಅವುಗಳಿಂದ ಒದಗುವ ವಿದ್ಯಾರ್ಥಿಗಳ ಸಂಖ್ಯಾಬಲ, ವಾರ್ಷಿಕ ಅನುದಾನದಲ್ಲಿನ ಹಣಕಾಸಿನ ಲಭ್ಯತೆ ಇವುಗಳನ್ನು ಅವಲಂಬಿಸಿರುತ್ತದೆ.

1075 (1489) ಶ್ರೀಮತಿ ಶಕುಂತಲಾ ಶೆಟ್ಟಿ (ಪುತ್ತೂರು) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಗ್ರಾಮ ಪಂಚಾಯ್ತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳ ನಿಯಮಗಳ ಜಾರಿಗೊಳ್ಳುತ್ತದೆಯೇ, ಇಲ್ಲದಿದ್ದಲ್ಲಿ ಏಕೆ ಜಾರಿಗೊಳಿಸಿಲ್ಲ, ಯಾವಾಗಿನಿಂದ ಜಾರಿಗೆ ಬಂದಿರುತ್ತದೆ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯ್ತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಎಂದು ಪ್ರತ್ಯೇಕವಾಗಿವೆಯೇ, ಇದ್ದಲ್ಲಿ ಇವುಗಳನ್ನು ಒಂದೇ ಹುದ್ದೆಯೆಂದು ಪರಿಗಣಿಸಲು ಇರುವ ತೊಂದರೆ ಏನು, ಈ ಹುದ್ದೆಗಳ ವ್ಯತ್ಯಾಸವೇನು ತಿಳಿಸುವುದು;

(ಇ) ಏಕ ರೂಪದ ಕರ್ತವ್ಯ ನಿರ್ವಹಣೆ ಇದ್ದು ಎರಡು ರೂಪದ ಕಾರ್ಯದರ್ಶಿಯನ್ನು ನೇಮಕ ಮಾಡುವ ಅವಶ್ಯಕತೆ ಇದೆಯೇ;

(ಈ) ಇದ್ದಲ್ಲಿ, ಈಗ ಇರುವ ಕಾರ್ಯದರ್ಶಿಗಳನ್ನು ಬದಲಾಯಿಸಿ ಬೇರೆ ಇಲಾಖೆಯಿಂದ ನಿಯೋಜನೆ ಮೇರೆಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ;

(ಉ) ಇದ್ದಲ್ಲಿ ಈಗ ಇರುವ ಕಾರ್ಯದರ್ಶಿಯವರನ್ನು ಏನು ಮಾಡಲಾಗುವುದು ವಿವರ ಒದಗಿಸುವುದು?

ಶ್ರೀ ಸಿ.ಎಂ. ಉದಾಸಿ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

(ಅ) ಕರ್ನಾಟಕ ಪಂಚಾಯತ್ ರಾಜ್ ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರ ನಿಯಮಗಳು 2006ನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 2 ಎಎಫ್‌ಎನ್ (2) 2006, ದಿನಾಂಕ: 18–11–2006 ಕರ್ನಾಟಕ ರಾಜ್ಯ ಪತ್ರ ವಿಶೇಷ ಪತ್ರಿಕೆಯಲ್ಲಿ ಪ್ರಕಟಿಸಲಾಗಿದೆ. ಸದರಿ ನಿಯಮಗಳು ದಿನಾಂಕ: 1–4–2007 ರಿಂದ ಜಾರಿಗೆ ಬಂದಿರುತ್ತದೆ.